**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಸಿ.ಎನ್.ಮಂಜೇಗೌಡ ಇವರು ನಿಯಮ 72ರ ನಿಯಮದ ಮೇರೆಗೆ ಪ್ರಸ್ತಾಪಿಸಿರುವ ಗಮನ ಸೆಳೆದ ಸೂಚನೆಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ**

**ವಿಷಯ:-**

ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ನಗದು ರಹಿತ ಚಿಕಿತ್ಸಾ ಸೌಲಭ್ಯವನ್ನು ಒದಗಿಸುವ ಕುರಿತು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ಸಾರ್ವಜನಿಕ ಹಿತಾಶಕ್ತಿ ಅರ್ಜಿ ಪರಿಗಣಿಸಿ ದಿನಾಂಕ:16.09.2020 ರಂದು ರಿಟ್ ನಂ 9117/2020ರ ಪ್ರಕಾರ ಒಂದು ತಿಂಗಳ ಒಳಗೆ ಸೂಕ್ತ ಕ್ರಮ ವಹಿಸಲು ನಿರ್ದೇಶಿಸಿದ್ದು, ಪ್ರಸ್ತುತ ರಾಜ್ಯ ಸರ್ಕಾರಿ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸಿಲಾಗಿರುವುದರಿಂದ ಈ ಯೋಜನೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ವಿಸ್ತರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಹೇಳಿಕೆ:-**

ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಪರಿಗಣಿಸಿ ದಿನಾಂಕ:16.09.2020ರಂದು ರಿಟ್ ಅರ್ಜಿ ಸಂಖ್ಯೆ:9117/2020ರ ಪ್ರಕಾರ ಸರ್ಕಾರದ ಪತ್ರ ಸಂಖ್ಯೆ:ಆಕುಕ 01 ಆರ್ಐ 2020, ದಿನಾಂಕ:27.10.2020ರಲ್ಲಿ ಸ್ವಾಯತ್ತ ಸಂಸ್ಥೆಯ ನೌಕರರಿಗೆ ವೈದ್ಯಕೀಯ ವೆಚ್ಚವನ್ನು ಭರಿಸುವ ಬಗ್ಗೆ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಸುವಂತೆ ನಿರ್ದೇಶಕರಿಗೆ ನಿರ್ದೇಶನ ನೀಡಿದ ಮೇರೆಗೆ 10 ಸದಸ್ಯರನ್ನು ಒಳಗೊಂಡ ಸಮಿತಿಯನ್ನು ರಚಿಸಿ ದಿನಾಂಕ:08/11/2021ರಂದು ಸಭೆ ನಡೆಸಲಾಗಿದೆ. ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನ ಕೈಗೊಳ್ಳಲಾಗಿದೆ.

- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿಗಳಿಗೆ ನೀಡುತ್ತಿರುವ ಸವಲತ್ತುಗಳನ್ನು ಸ್ವಾಯತ್ತ ಸಂಸ್ಥೆಗಳಿಗೆ ವಿಸ್ತರಿಸಬೇಕೆಂದು ತೀರ್ಮಾನಿಸಲಾಗಿರುತ್ತದೆ.
- ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಸರ್ಕಾರಿ ನೌಕರರಿಗೆ ನೀಡುತ್ತಿರುವಂತೆ, ವೈದ್ಯಕೀಯ ಶಿಕ್ಷಣ ಇಲಾಖೆ ಅಧೀನದಲ್ಲಿ ಇರುವ ಸ್ವಾಯತ್ತ ಸಂಸ್ಥೆಗಳಲ್ಲಿ ಅನುಷ್ಠಾನ ಮಾಡಬೇಕೆಂದು ತೀರ್ಮಾನಿಸಲಾಗಿರುತ್ತದೆ.
- ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರಿ ನೌಕರು ನೀಡುವ ಕೋಡುಗೆಯಂತೆ ಸ್ವಾಯತ್ತ ಸಂಸ್ಥೆಯ ನೌಕರರು ಕೂಡ ನೀಡುವಂತೆ ಹಾಗೂ ಈ ಕೊಡುಗೆಯನ್ನು ಕಾಲಕಾಲಕ್ಕೆ ಪರಿಷ್ಕರಿಸಲು ನಿರ್ಣಯಿಸಲಾಗಿರುತ್ತದೆ.

- ಕೊನೆಯದಾಗಿ ಸ್ವಾಯತ್ತ ಸಂಸ್ಥೆಗಳ ಉದ್ಯೋಗಿಗಳಿಗೆ ಅನ್ವಯವಾಗುವ ಮ್ಯುಟಾಟಿಸ್ ಮತ್ತು ಮ್ಯುಟಾಂಡಿಸ್‌ಗಳಂತಹ ವಿತ್ತಿಯ ಮತ್ತು ಹಣದ ಎರಡು ಪ್ರಯೋಜನಗಳನ್ನು ಲಭ್ಯವಾಗುವಂತೆ ಮಾಡಬಹುದು ಎಂದು ನಿರ್ಣಯಿಸಲಾಗಿರುತ್ತದೆ.

ಈ ನಡವಳಿಗಳಂತೆ ಸಿಆಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ವೈದ್ಯಕೀಯ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಯ ನೌಕರರಿಗೆ ವೈದ್ಯಕೀಯ ಚಿಕಿತ್ಸೆಯ ಮರುಪಾವತಿಗಾಗಿ ಯೋಜನೆಯನ್ನು ರೂಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸಿಬ್ಬಂದಿ ಮತ್ತು ಆಡಳಿತ ಸುದಾರಣೆ (ಸೇವಾ ನಿಯಮಗಳು) ಇಲಾಖೆಯು ಆಡಳಿತ ಇಲಾಖೆಗೆ ಬರೆದ ದಿನಾಂಕ:06.11.2021ರ ಟಿಪ್ಪಣಿಯಂತೆ ರಾಜ್ಯ ಸರ್ಕಾರಿ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆಯು ಜಾರಿಯಲ್ಲಿರುವುದಾಗಿ ತಿಳಿಸಲಾಗಿದೆ. ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ನೌಕರರಿಗಾಗಿ 'ಕರ್ನಾಟಕ ಆರೋಗ್ಯ ಸಂಜೀವಿನಿ' ಮಾದರಿಯ ಯೋಜನೆಯನ್ನು ರೂಪಿಸಲು ಉದ್ದೇಶಿಸಿದ್ದಲ್ಲಿ, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅಂತಿಮಗೊಳಿಸಿದ ನಂತರ ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆಯೊಂದಿಗೆ ಸಮಲೋಚಿಸಿದ ತದನಂತರ ಆರ್ಥಿಕ ಇಲಾಖೆಯನ್ನು ಸಂಪರ್ಕಿಸಿ ಸೂಕ್ತ ನಿರ್ಧಾರವನ್ನು ತಗೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದೆ.

ಅದರಂತೆ, ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡುವ ಬಗ್ಗೆ ಕೈಗೊಳ್ಳಲಾಗಿರುವ ತೀರ್ಮಾನಗಳ ಬಗ್ಗೆ ಆರ್ಥಿಕ ಇಲಾಖೆಯ ಅನುಮೋದನೆ ಕೋರಲಾಗಿ, ಆರ್ಥಿಕ ಇಲಾಖೆಯು ರಾಜ್ಯ ಸರ್ಕಾರಿ ನೌಕರರಿಗಾಗಿ ಆರೋಗ್ಯ ಸಂಜೀವಿನಿ ಯೋಜನೆಯನ್ನು ರೂಪಿಸುವ ಪ್ರಕ್ರಿಯೆ ಜಾರಿಯಲ್ಲಿರುದಾಗಿ ಸಿಆಸು ಇಲಾಖೆ ತಿಳಿಸಿರುವುದರಿಂದ, ಆಡಳಿತ ಇಲಾಖೆಯು ತನ್ನ ಅಧೀನದಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ನೌಕರರಿಗಾಗಿ ಅದೇ ಮಾದರಿಯ ಯೋಜನೆಯನ್ನು ರೂಪಿಸಲು ಉದ್ದೇಶಿಸಿದ್ದಲ್ಲಿ, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅಂತಿಮಗೊಳಿಸಿದ ನಂತರ ಸಿಆಸು ಇಲಾಖೆಯೊಂದಿಗೆ ಸಮಾಲೋಚಿಸಿ ನಂತರ ಆರ್ಥಿಕ ಇಲಾಖೆಯನ್ನು ಸಮಾಲೋಚಿಸಿ ನಿರ್ಧಾರ ಕೈಗೊಳ್ಳಬಹುದೆಂದು ತಿಳಿಸಿದೆ.

ಇತ್ತೀಚೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೂತನ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' ಯನ್ನು (THE KARNATKA AROGYA SANJEEVINI SCHEME-KASS) ಜಾರಿಗೊಳಿಸುವ ಕಾರ್ಯನೀತಿ (POLICY FRAMEWORK) ಬಗ್ಗೆ ಕೆಲವು ಆರಂಭಿಕ ಸೂಚನೆಗಳನ್ನು ಹೊರಡಿಸಿದ್ದು, ಅದರಂತೆ ಈ ಯೋಜನೆಯನ್ನು ಸಿಆಸು ಇಲಾಖೆಯು ಅಂತಿಗೊಳಿಸಿದ ನಂತರದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ

ವ್ಯಾಪ್ತಿಗೆ ಒಳಪಡುವ ಸ್ವಾಯತ್ತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳಿಗೂ ಈ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ ಪರಿಶೀಲಿಸಲಾಗುವುದು.

---

ಸಂಖ್ಯೆ:ಎಂಇಡಿ 429 ಎಂಪಿಎಸ್ 2022

(ಡಾ:ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು